RNU AIR DHARWAD

FEBRUARY 15, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಇಂದು ಮಹಾಶಿವರಾತ್ರಿ. ನಾಡಿನ ವಿವಿಧ ಶಿವ ದೇವಾಲಯಗಳಲ್ಲಿ ಬೆಳಗ್ಗಿನಿಂದ ದೇವರಿಗೆ ವಿಶೇಷ ಪೂಜೆ, ರುದ್ರಾಭಿಷೇಕ, ಬಿಲ್ವಪತ್ರೆ ಅರ್ಚನೆ ಸೇರಿದಂತೆ ಧಾರ್ಮಿಕ ಕಾರ್ಯಕ್ರಮಗಳು ಶ್ರದ್ಧಾಭಕ್ತಿಯಿಂದ ಜರುಗುತ್ತಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಸೇರಿದಂತೆ ಹಲವು ಗಣ್ಯರು ನಾಡಿನ ಜನತೆಗೆ ಮಹಾ ಶಿವರಾತ್ರಿಯ ಶುಭಾಶಯಗಳನ್ನು ಕೋರಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ ಮಹಾ ಶಿವರಾತ್ರಿ ಶುಭಾಶಯಗಳನ್ನು ತಿಳಿಸಿರುವ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ 'ಸರ್ವಶಕ್ತನಾದ ಶಿವನು, ನಾಡಿನ ಸಮಸ್ತರ ಬಾಳಿನಲ್ಲಿ ಸುಖ, ಶಾಂತಿ ಹಾಗೂ ನೆಮ್ಮದಿಯನ್ನು ಕರುಣಿಸಲಿ ಎಂದು ಹಾರೈಸಿದ್ದಾರೆ.

<><><>

ಕೋಲಾರದ ಕೋಟಿಲಿಂಗೇಶ್ವರ ದೇವಾಲಯದಲ್ಲಿ ಪ್ರತಿಷ್ಠಾಪಿಸಿರುವ, 108 ಅಡಿ ಎತ್ತರದ ಶಿವಲಿಂಗಕ್ಕೆ, ಮಹಾ ಶಿವರಾತ್ರಿ ದಿನವಾದ ಇಂದು ವಿಶೇಷ ದೀಪಾಲಂಕಾರ ಹಾಗೂ ಹೂವಿನ ಅಲಂಕಾರ ಮಾಡಲಾಗಿದೆ. ಇಂದು ಬೆಳಗ್ಗೆ ನಿಂದಲೇ ಭಕ್ತರು ಶಿವಪೂಜೆ ಕೈಗೊಂಡಿದ್ದಾರೆ. ದೇವರಿಗೆ ಅಭಿಷೇಕ, ವಿಶೇಷ ಪೂಜಾ ಕೈಂಕರ್ಯಗಳು ಜರಗುತ್ತಿವೆ. ಮಂಡ್ಯ ಜಿಲ್ಲೆ, ಆದಿಚುಂಚನಗಿರಿಯ ಕಾಲಭೈರವೇಶ್ವರ, ಕೆ.ಎಂ.ದೊಡ್ಡಿಯ ಆತ್ಮಲಿಂಗೇಶ್ವರ, ಗುತ್ತಲಿನ ಅರಕೇಶ್ವರ ದೇಗುಲಗಳಿಗೆ ಸಾವಿರಾರು ಭಕ್ತರು ಆಗಮಿಸಿ ದೇವರ ದರ್ಶನ ಪಡೆಯುತ್ತಿದ್ದಾರೆ.

<><><>

ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಮಠದಲ್ಲಿ, ಇಂದು 124 ನೇ ರಥೋತ್ಸವ ಜರುಗಲಿದೆ. ಶಿವರಾತ್ರಿ ಜಾಗರಣೆ ದಿನ, ಮಠದಲ್ಲಿ ರಾತ್ರಿ 8 ಗಂಟೆಗೆ ಗಾಯಕಿ ಜಯದೇವಿ ಜಂಗಮಶೆಟ್ಟಿ ಅವರ ಗಾಯನ ಪ್ರಸ್ತುತಿ ಜರುಗಲಿದೆ.

<><><>

ಧಾರವಾಡದ, ಮಹಾಶಿವರಾತ್ರಿ ಸುವರ್ಣ ಸಂಗೀತೋತ್ಸವ ಆಚರಣಾ ಸಮಿತಿ, ಇಂದು, ಶ್ರೀ ಮುದಿ ಮಾರುತಿ ದೇವಸ್ಥಾನದಲ್ಲಿ, ಅಹೋರಾತ್ರಿ ಶಿವಸ್ಫೂರ್ತಿ ಮಹಾಶಿವರಾತ್ರಿ ಸಂಗೀತೋತ್ಸವ ಹಾಗೂ ಪಂಡಿತ ಪಾರ್ಥಸಾರಥಿ, ವಿದುಷಿ ಸಂಗೀತಾ ಕಟ್ಟಿ ಕುಲಕರ್ಣಿ ಸೇರಿದಂತೆ ಐವರಿಗೆ, ಸುವರ್ಣ ಸಾಧಕ ಶಿವ– ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಿದೆ. ಸಮೀರ ಜೋಶಿ ಅವರಿಗೆ ಕಲಾಪೋಷಕ ಸುವರ್ಣ ಸಾಧಕ ಶಿವ ಪ್ರಶಸ್ತಿ ಹಾಗೂ ಅಥರ್ವ ವೈರಾಗಕರ ಅವರಿಗೆ, ಸುವರ್ಣ ಸಾಧಕ ಶಿವ ಸಮ್ಮಾನ ಪ್ರಶಸ್ತಿ ಪ್ರದಾನ ಜರುಗಲಿದೆ. ಧರ್ಮಾರ್ಥ ಸಂಗೀತ ಪಾಠಶಾಲೆ ಪ್ರಾಂಶುಪಾಲ, ಪಂಡಿತ ಶೇಷಗಿರಿ ದಂಡಾಪುರ ಅಧ್ಯಕ್ಷತೆಯಲ್ಲಿ

ಜರುಗುತ್ತಿರುವ, ಸಂಗೀತೋತ್ಸವ ಕಾರ್ಯಕ್ರಮದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಮಹಾಶಿವರಾತ್ರಿ ಸುವರ್ಣ ಸಂಗೀತೋತ್ಸವ ಆಚರಣಾ ಸಮಿತಿ ಕಾರ್ಯಾಧ್ಯಕ್ಷ ವೀರಣ್ಣ ಪತ್ತಾರ.

<><><>

ವೀರಣ್ಣ ಪತ್ತಾರ ಧ್ವನಿ 40 ಸೆಕೆಂದುಗಳು

<><><>

ಇಂದು ಸಮಾಜ ಸುಧಾರಕ, ಬಂಜಾರಾ ಸಮುದಾಯದ ಆರಾಧ್ಯ ದೈವ, ಸಂತ ಸೇವಾಲಾಲ ಜಯಂತಿ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ, ಸಂತ ಸೇವಾಲಾಲ ಜಯಂತಿ ಕಾರ್ಯಕ್ರಮವು, ಈ ಮಧ್ಯಾಹ್ನ 1 ಗಂಟೆಗೆ ಧಾರವಾಡದ, ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ, ಸಂತ ಸೇವಾಲಾಲ ಜಯಂತಿ ಕಾರ್ಯಕ್ರಮ ಜರುಗಿತು. ಶಾಸಕ ಧೀರಜ ಮುನಿರಾಜು ಪಾಲ್ಗೊಂಡರು.

<><><>

ಚಿಕ್ಕಮಗಳೂರು ಜಿಲ್ಲೆ, ಬಾಳೆಹೊನ್ನೂರು, ಕಳಸ, ಎನ್.ಆರ್.ಪುರ ಭಾಗದಲ್ಲಿ, ಲಘು ವಿಮಾನ ಹಾರಾಟ ನಡೆಸುತ್ತಿದ್ದು, ಈ ತಿಂಗಳಾಂತ್ಯದ ವರೆಗೆ, ಭೂ ಭಾಗದ ವೈಜ್ಞಾನಿಕ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ ಎಂದು, ಜಿಲ್ಲಾಧಿಕಾರಿ ಎಂ.ಎನ್.ನಾಗರಾಜ ತಿಳಿಸಿದ್ದಾರೆ.

<><><>

ಬೆಂಗಳೂರು, ಗಾಯತ್ರಿ ವಿಹಾರದಲ್ಲಿ ಆಯೋಜಿಸಿದ್ದ ಮಾಜಿ ಸಚಿವ, ವೀರಶೈವ ಮಹಾಸಭಾದ ಅಧ್ಯಕ್ಷರಾಗಿದ್ದ ದಿವಂಗತ ಭೀಮಣ್ಣ ಖಂಡ್ರೆ ಅವರ ನುಡಿನಮನ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಧೀಮಂತ ನಾಯಕ ಭೀಮಣ್ಣ ಖಂಡ್ರೆ ಅವರ ಜೀವನ ಸಾಧನೆಗಳನ್ನು ಸ್ಮರಿಸಿದರು.

<><><>

ಉಡುಪಿ ಜಿಲ್ಲೆ, ಬ್ರಹ್ಮಾವರ ತಾಲೂಕು, ಕೋಟತಟ್ಟು ಗ್ರಾಮ ಪಂಚಾಯಿತಿ ವ್ಯಾಪ್ತಿಯ, ಚಿಟ್ಟಿಬೆಟ್ಟು ಗ್ರಾಮದಲ್ಲಿ, ಪರಿಶಿಷ್ಟ ಪಂಗಡದ, ಕೊರಗ ಸಮುದಾಯದವರಿಗಾಗಿ, ಒಂದು ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ, 8 ಮನೆಗಳನ್ನು, ಪುತ್ತಿಗೆ ಮಠದ ಶ್ರೀ ಸುಗುಣೇಂದ್ರ ಶ್ರೀಗಳು ಹಸ್ತಾಂತರಿಸಿದರು. ಮನೆಗಳ ನಿರ್ಮಾಣ ಕಾರ್ಯದಲ್ಲಿ, ಧನ ಸಹಾಯ ಮಾಡಿದ ದಾನಿಗಳನ್ನು, ಪುತ್ತಿಗೆ ಶ್ರೀಗಳು ಅಭಿನಂದಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>